**Akashvani : Bangalore**
**Regional Bulletin In Kannada**
**27.08.2026 / 18.40 hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**27.08.2026 / 18.40 hrs**

---

ಮುಖ್ಯಾಂಶಗಳು

೧. ರಾಜ್ಯದ ೧೦೧ ತಾಲೂಕುಗಳಲ್ಲಿ ಬರ - ಉಪಮುಖ್ಯಮಂತ್ರಿ ಡಾ. ಪರಮೇಶ್ವರ್ ಮಾಹಿತಿ; ಬೆಳೆ ವಿಮೆ ಅರ್ಜಿ ಸಲ್ಲಿಕೆಗೆ ಕಾಲಮಿತಿ ಈ ತಿಂಗಳ ೩೧ರ ವರೆಗೆ ವಿಸ್ತರಣೆ

೨. ನೇಪಾಳದ ಕ್ಷಿಪ್ರ ನೆರೆ; ಸಂಕಷ್ಟದಲ್ಲಿರುವ ಕನ್ನಡಿಗರಿಗೆ ಮುಖ್ಯಮಂತ್ರಿ ಧೈರ್ಯ

೩. ರಾಜ್ಯದ ೩ ಲಕ್ಷಕ್ಕೂ ಅಧಿಕ ಜಲ ಆಸ್ತಿ ಮುಂದಿನ ತಿಂಗಳಾಂತ್ಯದೊಳಗೆ ಡಿಜಿಟಲೀಕರಣ - ಸಚಿವ ಈಶ್ವರ ಖಂಡ್ರೆ

೪. ಕ್ರೀಡಾ ಸೌಕರ್ಯ ಉತ್ತಮಪಡಿಸಲು ಕೇಂದ್ರ ಸರ್ಕಾರದಿಂದ ಒಂದು ಸಾವಿರದ ೬೭ ಖೇಲೋ ಇಂಡಿಯಾ ಸ್ಥಾಪನೆ - ಸಚಿವ ವಿ. ಸೋಮಣ್ಣ

೫. ರಾಜ್ಯ ಮಟ್ಟದ ಸಬ್ ಜೂನಿಯರ್ ಹಾಕಿ ಪಂದ್ಯಾವಳಿ; ಪ್ರಶಸ್ತಿಗಾಗಿ ನಾಳೆ ಹಾವೇರಿ - ಧಾರವಾಡ ತಂಡ ಮುಖಾಮುಖಿ

---

ರಾಜ್ಯದ ೧೦೧ ತಾಲೂಕುಗಳಲ್ಲಿ ಬರ ಪರಿಸ್ಥಿತಿ ಇದೆ ಎಂದು ಉಪಮುಖ್ಯಮಂತ್ರಿ ಡಾಕ್ಟರ್ ಪರಮೇಶ್ವರ್ ಮಾಹಿತಿ ನೀಡಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ರಾಜ್ಯದಲ್ಲಿ ಜೂನ್‌ನಿಂದ ವಾಡಿಕೆಯ ೬೬೬ ಮಿಲಿ ಮೀಟರ್‌ಗೆ ಬದಲಾಗಿ ಕೇವಲ ೪೬೫ ಮಿಲಿ ಮೀಟರ್ ಮಳೆಯಾಗಿದೆ ಒಟ್ಟಾರೆ ಶೇಕಡ ೩೦ರಷ್ಟು ಮಳೆ ಕೊರತೆಯಾಗಿದೆ ಉತ್ತರ ಒಳನಾಡಿನಲ್ಲಿ ಶೇಕಡ ೩೧, ದಕ್ಷಿಣ ಒಳನಾಡಿನಲ್ಲಿ ೪೧ ಮಲೆನಾಡಿನಲ್ಲಿ ೩೫ ಹಾಗೂ ಕರಾವಳಿಯಲ್ಲಿ ಶೇಕಡ ೨೪ರಷ್ಟು ಮಳೆ ಕೊರತೆಯಾಗಿದೆ ಎಂದು ತಿಳಿಸಿದರು.

ಆಗಸ್ಟ್ ೨೫ರವರೆಗಿನ ಮಾಹಿತಿಯಂತೆ ನಾಲ್ಕು ಲಕ್ಷದ ೩೬ ಸಾವಿರ ಹೆಕ್ಟೇರುಗಳ ಪೈಕಿ ಕೇವಲ ಮೂರು ಲಕ್ಷ ನಾಲ್ಕು ಸಾವಿರ ಹೆಕ್ಟರ್‌ಗಳಲ್ಲಿ ಮಾತ್ರ ಬಿತ್ತನೆ ಆಗಿದೆ. ಬಿತ್ತನೆಯಾದ ಬೆಳೆಗಳಿಗೂ ಕೂಡ ಮಳೆ ಸಾಲದೆ ನಿರೀಕ್ಷಿತ ಬೆಳವಣಿಗೆ ಸಾಧ್ಯವಾಗುತ್ತಿಲ್ಲ ಎಂದು ಹೇಳಿದರು.

ಕೇಂದ್ರ ಸರ್ಕಾರದ ಬರ ಕೈಪಿಡಿ ಪ್ರಕಾರ ಬರಪೀಡಿತ ತಾಲೂಕು ಎಂದು ಘೋಷಿಸಲು ಹಲವು ಅಗತ್ಯ ಅಂಶಗಳುಗಳನ್ನು ಪರಿಶೀಲಿಸಬೇಕಾಗುತ್ತದೆ ಸದ್ಯಕ್ಕೆ ೧೦೧ ತಾಲೂಕುಗಳು ಬರಪೀಡಿತ ಎಂದು ಘೋಷಿಸುವುದಕ್ಕೆ ಅರ್ಹತೆ ಪಡೆದಿವೆ. ಅರ್ಹತೆ ಚೌಕಟ್ಟಿನಲ್ಲಿ ಬರುವ ಉಳಿದ ೩೨ ತಾಲೂಕುಗಳ ಅಂಶಗಳನ್ನು ಪರಿಶೀಲಿಸುವ ಕೆಲಸ ನಡೆಯುತ್ತಿದೆ ಎಂದು ಕಂದಾಯ ಖಾತೆಯನ್ನು ಹೊಂದಿರುವ ಡಾಕ್ಟರ್ ಪರಮೇಶ್ವರ್ ತಿಳಿಸಿದ್ದಾರೆ.

ಮಳೆಯ ಕೊರತೆಯ ನಡುವೆ ಬೆಳೆಯುವ ಅಲ್ಪಾವಧಿ ತಳಿಗಳನ್ನು ಬೆಳೆಯುವಂತೆ ರೈತರಿಗೆ ತಿಳಿವಳಿಕೆ ನೀಡಿ ಬಿತ್ತನೆ ಬೀಜ ವಿತರಿಸಲಾಗಿದೆ ಎಂದು ಅವರು ಹೇಳಿದರು.

ರಾಜ್ಯದಲ್ಲಿ ಕಳೆದ ವರ್ಷ ಇದೇ ಅವಧಿಯಲ್ಲಿ ೮೧೫.೭೦ ಟಿಎಂಸಿಗಳಷ್ಟು ನೀರು ಸಂಗ್ರಹವಾಗಿತ್ತು ಈ ವರ್ಷ ೬೮೪.೦೯ ಟಿಎಂಸಿಗಳಷ್ಟು ಮಾತ್ರ ನೀರು ಸಂಗ್ರಹವಾಗಿದೆ ಸದ್ಯ ೭೫೮ ಗ್ರಾಮಗಳಿಗೆ ಟ್ಯಾಂಕರ್‌ಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ ಪರಿಸ್ಥಿತಿ ತೀವ್ರವಾದರೆ ಮುಂದಿನ ಬೇಸಿಗೆಯಲ್ಲಿ ೨ ಸಾವಿರದ ೫೯ ಗ್ರಾಮ ಪಂಚಾಯತ್‌ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಬಹುದು ಎಂದು ಅಂದಾಜು ಮಾಡಲಾಗಿದ್ದು ಅದಕ್ಕೆ ಸೂಕ್ತ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದರು.

ರಾಜ್ಯ ಸರ್ಕಾರ ಕುಡಿಯುವ ನೀರಿನ ಉದ್ದೇಶಗಳಿಗಾಗಿ ಒಟ್ಟು ೩೦೬ ಕೋಟಿ ರೂಪಾಯಿ ಹಣ ಬಿಡುಗಡೆ ಮಾಡಿದೆ ಬರ ಪರಿಸ್ಥಿತಿ ನಿಭಾಯಿಸಲು ಹಣದ ಕೊರತೆ ಇಲ್ಲ ಎಂದು ಅವರು ಹೇಳಿದರು.

ರಾಜ್ಯದಲ್ಲಿ ೧೫೧ ಲಕ್ಷ ಟನ್‌ಗಳಷ್ಟು ಮೇವಿನ ಸಂಗ್ರಹ ಇದೆ ಇದು ೩೩ ವಾರಗಳಿಗೆ ಸಾಕಾಗುತ್ತದೆ ಎಂದು ಉಪ ಉಪಮುಖ್ಯಮಂತ್ರಿ ಹೇಳಿದರು ಫಸಲ್ ಭೀಮಾ ಯೋಜನೆ ಅಡಿ ರೈತರು ವಿಮಾ ಪರಿಹಾರ ಪಡೆಯಲು ಅವಕಾಶವಾಗುವಂತೆ ಬೆಳೆ ವಿಮೆ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ಈ ತಿಂಗಳ ೩೧ರವರೆಗೆ ವಿಸ್ತರಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಾಕ್ಟರ್ ಪರಮೇಶ್ವರ್ ತಿಳಿಸಿದರು.

ಬರದ ಕಾರಣದಿಂದ ಜನರು ಗುಳೆ ಹೋಗುವುದನ್ನು ತಪ್ಪಿಸಲು ವಿಕಸಿತ ಭಾರತ ಜಿ-ರಾಮ್‌ಜಿ ಯೋಜನೆಯಡಿ ೧೭ ಸಾವಿರದ ೪೭೦ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದ್ದು, ೭೭ ಲಕ್ಷ ೨೩ ಸಾವಿರ ಮಾನವ ದಿನಗಳನ್ನು ಸೃಜಿಸಲಾಗಿದೆ ಎಂದು ಕಂದಾಯ ಖಾತೆಯನ್ನು ಹೊಂದಿರುವ ಡಾ. ಜಿ. ಪರಮೇಶ್ವರ್ ವಿವರಿಸಿದರು.

---

ನವದೆಹಲಿ ಪ್ರವಾಸದಲ್ಲಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ನೇಪಾಳದಲ್ಲಿ ತೊಂದರೆಗೀಡಾಗಿರುವ ಕನ್ನಡಿಗರ ಬೆಂಬಲಕ್ಕೆ ರಾಜ್ಯ ಸರ್ಕಾರ ನಿಂತಿದ್ದು, ಎದೆಗುಂದುವ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ. ಅವರು ನೇಪಾಳದಲ್ಲಿರುವ ಕನ್ನಡಿಗ ಮಲ್ಲಿನಾಥ್ ಅವರೊಂದಿಗೆ ವಿಡಿಯೋ ಕರೆ ಮಾಡಿ, ಮಾತನಾಡಿ ಧೈರ್ಯ ಹೇಳಿದರು.

ಕರ್ನಾಟಕದಿಂದ ನೇಪಾಳ ಪ್ರವಾಸಕ್ಕೆ ಹೊರಟವರ ಸಂಪರ್ಕ ಕಡಿತವಾಗಿದೆ. ಹುಡುಕಾಟದ ಪ್ರಕ್ರಿಯೆ ನಡೆಯುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಈ ಮಧ್ಯೆ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್, ನೇಪಾಳದಲ್ಲಿ ಬೆಂಗಳೂರಿನ ೮ ಜನರು ಸಂಕಷ್ಟದಲ್ಲಿ ಸಿಲುಕಿದ್ದಾರೆ. ಅವರ ರಕ್ಷಣೆಗೆ ಕ್ರಮ ತೆಗೆದುಕೊಳ್ಳಲಾಗಿದೆ ಎಂದು ಅವರು ಹೇಳಿದ್ದಾರೆ.

ನೇಪಾಳದಲ್ಲಿ ಸಂಭವಿಸಿದ ಪ್ರಕೃತಿ ವಿಕೋಪ ಹಾಗೂ ದಿಢೀರ್ ಪ್ರವಾಹಕ್ಕೆ ಸಂಬಂಧಿಸಿದಂತೆ, ರಾಜ್ಯದ ಪ್ರವಾಸಿಗರು ಅಥವಾ ನಾಗರಿಕರು ಯಾರಾದರೂ ಕಾಣೆಯಾಗಿದ್ದರೆ ಅಥವಾ ಸಂಪರ್ಕಕ್ಕೆ ಸಿಗದೇ ಇದ್ದಲ್ಲಿ, ತಕ್ಷಣವೇ ಅವರ ವಿವರಗಳನ್ನು ಒದಗಿಸುವಂತೆ ರಾಜ್ಯ ಸರ್ಕಾರ ಸಾರ್ವಜನಿಕರಲ್ಲಿ ಮನವಿ ಮಾಡಿದೆ.

ಕೇಂದ್ರ ಗೃಹ ಸಚಿವಾಲಯ ಹಾಗೂ ವಿದೇಶಾಂಗ ವ್ಯವಹಾರಗಳ ಸಚಿವಾಲಯದೊಂದಿಗೆ ರಾಜ್ಯ ಸರ್ಕಾರವು ಸತತ ಸಂಪರ್ಕದಲ್ಲಿದ್ದು, ಸಂತ್ರಸ್ತ ಕುಟುಂಬಗಳಿಗೆ ಅಗತ್ಯ ನೆರವು ನೀಡಲು ಮತ್ತು ಕಾಣೆಯಾದವರನ್ನು ಪತ್ತೆಹಚ್ಚಲು ಸಮರೋಪಾದಾದಿಯಲ್ಲಿ ಕ್ರಮ ಕೈಗೊಳ್ಳುತ್ತಿದೆ.

ಸಾರ್ವಜನಿಕರು ಕಾಣೆಯಾದ ವ್ಯಕ್ತಿಯ ಪೂರ್ಣ ಹೆಸರು, ಮೊಬೈಲ್ ಸಂಖ್ಯೆ, ಕೊನೆಯದಾಗಿ ಸಂಪರ್ಕಿಸಿದ ಸ್ಥಳ ಮತ್ತು ಸಮಯ ಹಾಗೂ ಖಾಯಂ ವಿಳಾಸದ ವಿವರಗಳನ್ನು ಸರ್ಕಾರಕ್ಕೆ ತಕ್ಷಣವೇ ಒದಗಿಸಲು ಕೋರಲಾಗಿದೆ.

ಈ ವಿವರಗಳನ್ನು ನಮೂದಿಸಲು ರಾಜ್ಯ ಸರ್ಕಾರವು ವಿಶೇಷ ಗೂಗಲ್ ಫಾರ್ಮ್ ಲಿಂಕ್ ಅನ್ನು ಸಹ ಒದಗಿಸಿದೆ. ಸಂತ್ರಸ್ತರು ಮತ್ತು ಅವರ ಕುಟುಂಬಸ್ಥರ ನೆರವಿಗಾಗಿ ರಾಜ್ಯ ತುರ್ತು ಕಾರ್ಯಾಚರಣೆ ಕೇಂದ್ರ ೨೪x೭ ಸಹಾಯವಾಣಿ ತೆರೆದಿದ್ದು, ಸಾರ್ವಜನಿಕರು ೧೦೭೦ ಅಥವಾ ದೂರವಾಣಿ ಸಂಖ್ಯೆ ೦೮೦-೨೨೨೫೩೭೦೭ ಸಂಖ್ಯೆಗೆ ಕರೆ ಮಾಡಬಹುದಾಗಿದೆ. ಇಮೇಲ್ ಮೂಲಕ ಮಾಹಿತಿ ನೀಡಲು seockarnataka@gmail.com ವಿಳಾಸಕ್ಕೆ ಕಳುಹಿಸಬಹುದಾಗಿದೆ.

---

ರಾಜ್ಯದಲ್ಲಿ ೩ ಲಕ್ಷಕ್ಕೂ ಅಧಿಕ ಜಲ ಆಸ್ತಿಗಳಿದ್ದು, ಇವುಗಳನ್ನು ಮುಂದಿನ ತಿಂಗಳ ಅಂತ್ಯದೊಳಗೆ ಡಿಜಟಲೀಕರಿಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ.

ಅವರು ಬೆಂಗಳೂರಿನಲ್ಲಿಂದು ಅವರು, ಗ್ರಾಮೀಣ ನೀರು ಸರಬರಾಜು ಮತ್ತು ಮೂಲಸೌಕರ್ಯದ ಸುಸ್ಥಿರ ಮತ್ತು ವೈಜ್ಞಾನಿಕ ನಿರ್ವಹಣೆಗಾಗಿ ಸಿದ್ಧಪಡಿಸಲಾಗಿರುವ ಮೊಬೈಲ್ ಮತ್ತು ವೆಬ್ ಅಪ್ಲಿಕೇಷನ್ ಲೋಕಾರ್ಪಣೆ ಮಾಡಿ ಮಾತನಾಡಿದರು.

ಮೊದಲ ಹಂತದ ಪರಿಶೀಲನೆ ಅಡಿಯಲ್ಲಿ ಈವರೆಗೆ ೭೦ ಸಾವಿರಕ್ಕೂ ಅಧಿಕ ಜಲ ಸ್ವತ್ತುಗಳ ದಾಖಲೀಕರಣ ಮಾಡಲಾಗಿದೆ, ಎಲ್ಲ ಗ್ರಾಮೀಣ ಆಸ್ತಿಗಳನ್ನೂ ಜಿಯೋ ಟ್ಯಾಗ್ ಮಾಡಿ ಪಾರದರ್ಶಕತೆ ತರಲಾಗುವುದು ಎಂದರು.

---

ಪ್ರಧಾನಿ ನರೇಂದ್ರ ಮೋದಿ ಅವರು ವರ್ಚುವಲ್ ಮೂಲಕ ಇಂದು ನಡೆಸಿದ ಖೇಲ್ ಕಿ ಬಾತ್ ಪಿಎಂ ಕೆ ಸಾತ್ ಸಂವಾದದಲ್ಲಿ ರಾಜ್ಯದ ೧೬ ಜಿಲ್ಲೆಗಳಿಂದ ವಿದ್ಯಾರ್ಥಿಗಳು, ಕ್ರೀಡಾಪಟುಗಳು ಹಾಗೂ ಗಣ್ಯರು ವರ್ಚುವಲ್ ಮೂಲಕ ಭಾಗವಹಿಸಿದ್ದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ದೇಶದಾದ್ಯಂತ ಒಂದು ಸಾವಿರದ ೮೭ ಖೇಲೋ ಇಂಡಿಯಾ ಕೇಂದ್ರಗಳ ಆರಂಭಿಸಿದೆ ಎಂದು ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಹೇಳಿದ್ದಾರೆ.

ರಾಷ್ಟ್ರೀಯ ಕ್ರೀಡಾ ದಿನದ ಅಂಗವಾಗಿ ಬೆಂಗಳೂರಿನ ರಾಮಯ್ಯ ಕಾನೂನು ಕಾಲೇಜಿನಲ್ಲಿ ನಡೆದ ಖೇಲೋ ಇಂಡಿಯಾ ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ದೇಶದಲ್ಲಿ ಕ್ರೀಡಾ ಕ್ಷೇತ್ರವನ್ನು ಮತ್ತಷ್ಟು ಸದೃಢಗೊಳಿಸುವ ನಿಟ್ಟಿನಲ್ಲಿ, ದೇಶದಾದ್ಯಂತ ಖೇಲೋ ಇಂಡಿಯಾ ಕೇಂದ್ರಗಳ ಸ್ಥಾಪನೆ ಮಾಡಲಾಗಿದೆ. ಅಲ್ಲದೇ, ೩೪೯ ಕ್ರೀಡಾ ಮೂಲಸೌಕರ್ಯ ಯೋಜನೆಗಳಿಗೆ ಸುಮಾರು ೩ ಸಾವಿರದ ೧೭೪ ಕೋಟಿ ರೂಪಾಯಿಗಳ ಹೂಡಿಕೆಯೊಂದಿಗೆ ಅನುಮೋದನೆ ನೀಡಲಾಗಿದೆ ಎಂದು ಸಚಿವರು ಹೇಳಿದರು.

ಸಮಾರಂಭದಲ್ಲಿ, ಧ್ಯಾನ್‌ಚಂದ್ ಪ್ರಶಸ್ತಿ ಪುರಸ್ಕೃತೆ ತೃಪ್ತಿ ಮುರುಗುಂಡೆ ಹಾಗೂ ಪ್ಯಾರಾ ಒಲಿಂಪಿಕ್ಸ್ ಅಥ್ಲೀಟ್ ಹರ್ಷಿತಾ ರಾಜು ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

---

ದೇಶವನ್ನು ೨೦೪೭ರ ವೇಳೆಗೆ ಅಭಿವೃದ್ಧಿ ಹೊಂದಿದ ದೇಶವನ್ನಾಗಿಸುವ ನಿಟ್ಟಿನಲ್ಲಿ ಸಶಕ್ತ ನವ ಸಮಾಜ ನಿರ್ಮಿಸುವುದು ಪ್ರಧಾನಮಂತ್ರಿ ಅವರ ಉದ್ದೇಶವಾಗಿದೆ ಎಂದು ಕೇಂದ್ರ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಹಾಗೂ ಕಾರ್ಮಿಕ ಮತ್ತು ಉದ್ಯೋಗ ರಾಜ್ಯಖಾತೆ ಸಚಿವೆ ಶೋಭಾ ಕರಂದ್ಲಾಜೆ ಹೇಳಿದ್ದಾರೆ.

ಅವರು ಬೆಂಗಳೂರಿನಲ್ಲಿಂದು ಇನ್ಸ್ಟಿಟ್ಯೂಟ್ ಫಾರ್ ಸ್ಟೆಮ್ ಸೆಲ್ ಸೈನ್ಸ್ ಅಂಡ್ ರಿಜನರೇಟಿವ್ ಮೆಡಿಸಿನ್' ನಲ್ಲಿ "ಖೇಲೋ ಇಂಡಿಯಾ ಸಂವಾದ - ಖೇಲ್ ಕಿ ಬಾತ್ ಪಿಎಂ ಕೆ ಸಾಥ್" ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರಧಾನಮಂತ್ರಿ ಅವರು ಇಂದು ಹತ್ತು ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ, ಸಂದೇಶ ನೀಡಿದ್ದಾರೆ. ನಶಮುಕ್ತ ಭಾರತ ಹಾಗೂ ಬಲಿಷ್ಠವಾದ ಯುವ ಸಮುದಾಯ ಬೆಳೆಸುವುದು ಕಾರ್ಯಕ್ರಮದ ಧ್ಯೇಯವಾಗಿದೆ ಎಂದರು.

---

ಬೆಳಗಾವಿಯ ಕೆ.ಎಲ್.ಇ. ನರ್ಸಿಂಗ್ ಕಾಲೇಜಿನ ಸಭಾಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ

ಖ್ಯಾತ ಕ್ರೀಡಾಪಟುಗಳಾದ ಇಶಾ ಪಾಟೀಲ, ಭೂಷಣ ಸೇರಿದಂತೆ ವಿದ್ಯಾರ್ಥಿಗಳು ಹಾಗೂ ಗಣ್ಯರು ಭಾಗವಹಿಸಿ ಪ್ರಧಾನ ಮಂತ್ರಿಗಳ ವರ್ಚುವಲ್ ಭಾಷಣಕ್ಕೆ ಸಾಕ್ಷಿಯಾದರು. ಈ ಸಂದರ್ಭದಲ್ಲಿ ಮಾತನಾಡಿದ ಎನ್.ಎಸ್.ಎಸ್. ಅಧಿಕಾರಿ ಅಶ್ವಿನಿ ನರಸಣ್ಣವರ, ಯುವಜನತೆ ಕ್ರೀಡೆಗಳಲ್ಲಿ ಆಸಕ್ತಿ ವಹಿಸಬೇಕು ಪ್ರಧಾನಿ ಅವರು ಸೂಚಿಸಿದಂತೆ ಮೈ ಭಾರತ್ ಪೋರ್ಟಲ್‌ನಲ್ಲಿ ಅನಿಸಿಕೆಗಳನ್ನು ಹಂಚಿಕೊಳ್ಳಬೇಕೆಂದು ಸಲಹೆ ನೀಡಿದರು.

---

ಬಳ್ಳಾರಿ ನಗರದ ಜಿಲ್ಲಾ ಹಾಕಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ರಾಜ್ಯ ಮಟ್ಟದ ೧೬ ವರ್ಷದೊಳಗಿನ ಪುರುಷರ ಸಬ್ ಜೂನಿಯರ್ ಹಾಕಿ ಪಂದ್ಯಾವಳಿಯ ಫೈನಲ್ಸ್ ನಾಳೆ ನಡೆಯಲಿದೆ. ಹಾವೇರಿ ಮತ್ತು ಧಾರವಾಡ ತಂಡಗಳು ಪ್ರಶಸ್ತಿಗಾಗಿ ಸೆಣಸಲಿವೆ.

___________ ಮುಕ್ತಾಯ __________